ಇಲಾಖೆ / ವಿಷಯ : DEPARTMENT / SUBJECT: 13 ವಿಧಾನಸಭೆ ಸದಸ್ಯರು

ಪತ್ರಿಕೆಯ ಹೆಸರು : NAME OF THE NEWS PAPER: 

ದಿನಾಂಕ : DATE : 22/1/21

# ಸೌಮ್ಯ ವಿರುದ್ಧ ಕ್ರಮಕ್ಕೆ ಆಗ್ರಹ

**ಬೆಂಗಳೂರು:** ಕರ್ತವ್ಯ ನಿರತ ಮಹಿಳಾ ಪೊಲೀಸ್ ಕಾನ್‌ಸ್ಟೇಬಲ್ ಮೇಲೆ ಹಲ್ಲೆ ಮಾಡಿದ ಶಾಸಕಿ ಸೌಮ್ಯರೆಡ್ಡಿ ಅವರ ಮೇಲೆ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಬಿಜೆಪಿ ಮಹಿಳಾ ಘಟಕದ ಸದಸ್ಯರು ಗೃಹ ಸಚಿವ ಬಸವರಾಜ ಬೊಮ್ಮಾಯಿಗೆ ದೂರು ಸಲ್ಲಿಸಿದರು.

ವಿಧಾನಸೌಧದ ಗೃಹ ಸಚಿವರ ಕಚೇರಿಯಲ್ಲಿ ಬಿಜೆಪಿ ಮಹಿಳಾ ಮೋರ್ಚಾ ರಾಜ್ಯಾಧ್ಯಕ್ಷೆ ಗೀತಾ ವಿವೇಕಾನಂದ ನೇತೃತ್ವದಲ್ಲಿ ಭೇಟಿ ಮಾಡಿ ದೂರು ಸಲ್ಲಿಸಿದ ಅವರು, ಕಾಂಗ್ರೆಸ್ ಪಕ್ಷ ಬೆಂಗಳೂರಿನಲ್ಲಿ ಬುಧವಾರ ಏರ್ಪಡಿಸಿದ ಪ್ರತಿಭಟನೆ ಸಂದರ್ಭದಲ್ಲಿ ಮಹಿಳಾ ಪೊಲೀಸ್ ಕಾನ್‌ಸ್ಟೇಬಲ್ ಮೇಲೆ ಶಾಸಕಿ ಸೌಮ್ಯರೆಡ್ಡಿ ಅವರು ಹಲ್ಲೆ ಮಾಡಿದ್ದು ಅವರ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿದ್ದಾರೆ.